Prof H.K.Yadahalli Principal of SECAB ARSI Arts, Science and Commerce College for Women, Vijayapur invited as Resource person at Karnataka State Akkamahadevi Women University, Vijayapur




## ಡಿಜಿಟಲ್ ಕ್ರಾಂತಿಯಿಂದ ಪತ್ರಿಕೋದ್ಯಮ ಸ್ವರೂಪ ಸಂಪೂರ್ಣ ಬದಲಾಗಿದೆ:ಯಡಹಳ್ಳಿ



ವಿಜಯಪುರ: ಡಿಜಿಟಲ್ ಕ್ರಾಂತಿಯಿಂದಾಗಿ ಪತ್ರಿಕೋದ್ಯಮದ ಸ್ವರೂಪ ಸಂಪೂರ್ಣವಾಗಿ ಬದಲಾಗಿದ್ದು ಪತ್ರಕರ್ತರು ಕೇವಲ ಪತ್ರಕರ್ತರಾಗಿ ಉಳಿದಿಲ್ಲ. ಹೀಗಾಗಿ ಭವಿಷ್ಯದಲ್ಲಿ ಪತ್ರಕರ್ತರಾಗುವವರು ಹಲವು ಕೌಶಲಗಳನ್ನು ಕರಗತ ಮಾಡಿಕೊಳ್ಳುವುದು ಅಗತ್ಯವಾಗಿದೆ. ಬದಲಾಗುತ್ತಿರುವ ಮಾಧ್ಯಮ ಕ್ಷೇತ್ರದಲ್ಲಿ ಹೊಸ-ಹೊಸ ತಂತ್ರಜ್ಞಾನಗಳನ್ನು ಅಳವಡಿಕೆ ಮಾಡಿಕೊಂಡು ಅತ್ಯಂತ ಕ್ರಿಯಾಶೀಲತೆಯಿಂದ ತೊಡಗಿಸಿಕೊಂಡಾಗ ಮಾತ್ರ ಯಶಸ್ಸು ಸಾಧ್ಯ ಎಂದು ನಗರದ ಸಿಕ್ಯಾಬ್ ಎ.ಆರ್.ಎಸ್.ಐ ಮಹಿಳಾ ಕಾಲೇಜಿನ ಪ್ರಾಂಶುಪಾಲ ಪ್ರೊ.ಎಚ್. ಕೆ.ಯಡಹಳ್ಳಿ ಹೇಳಿದರು. ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಪ್ರಯುಕ್ತ 'ಬದಲಾಗುತ್ತಿರುವ ಪತ್ರಿಕೋದ್ಯಮದ ಸ್ವರೂಪ' ಎಂಬ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ ಇಪ್ಪತ್ತು ವರ್ಷಗಳಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆಗಳು ನಡೆದಿದ್ದು, ನಿಜವಾದ ಪ್ರಜಾಪ್ರಭುತ್ವದ ಸಾಧನೆಗೆ ದಾರಿ ಮಾಡಿಕೊಟ್ಟಿವೆ. ಪತ್ರಿಕೆಗಳಲ್ಲಿ ಫ್ಯಾಕ್ಟ್ ಚೆಕಿಂಗ್ ಎಂಬ ತಂತ್ರಜ್ಞಾನವನ್ನು ಅಳವಡಿಸುವ ಮೂಲಕ ಮಾಧ್ಯಮ ಕ್ಷೇತ್ರ ಇನ್ನೂ ಹೆಚ್ಚು ಜನಪ್ರಿತಿಯನ್ನು ಪಡೆಯುವ ಮೂಲಕ ಜನರ ವಿಶ್ವಾಸವನ್ನು ಗಳಿಸಿಕೊಂಡಿದೆ ಇಂದು ಪತ್ರಿಕೆಗಳು ಹೆಚ್ಚು ಪ್ರಜಾಪ್ರಭುತ್ವ ಸಾಧಿಸಿದ್ದು, ಪತ್ರಿಕೆಗಳು ಜನರ ಸಮಸ್ಯೆಯನ್ನು ಬಗೆಹರಿಸುವ ಕಾರ್ಯವನ್ನೂ ಮಾಡಬೇಕಾಗಿದೆ. ಮುದ್ರಣ ಮಾಧ್ಯಮದಲ್ಲಿ ಭಾಷಾ ಶುದ್ಧತೆ, ಭಾಷಾ ಸ್ಪಷ್ಟತೆ ಹೊಂದಿರಬೇಕು. ಆದ್ದರಿಂದ ಪತ್ರಿಕೋದ್ಯಮದ ವಿದ್ಯಾರ್ಥಿಗಳಾದ ನೀವು ಪ್ರತಿ ದಿನ ಒಂದು ಇಂಗ್ಲೀಷ ಮತ್ತು ಕನ್ನಡ ಪತ್ರಿಕೆಯನ್ನುಓದಬೇಕುಎಂದುವಿದ್ಯಾರ್ಥಿನಿಯರಿಗೆ ಕಿವಿಮಾತನ್ನು ಹೇಳಿದರು. ಇದೆ ಸಂದರ್ಭದಲ್ಲಿ ಸುವರ್ಣ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಾಗೂ ಹಿರಿಯ ಪತ್ರಕರ್ತ ರುದ್ರಪ್ಪ ಆಸಂಗಿ ಮಾತನಾಡಿ, ಮಾಧ್ಯಮ ಕ್ಷೇತ್ರದಲ್ಲಿ ಇರುವ ಸವಾಲುಗಳನ್ನು ಎದುರಿಸಿ ಧೈರ್ಯದಿಂದ ಆತ್ಮಸ್ಥೈರ್ಯದಿಂದ ಮುನ್ನುಗ್ಗಿದಾಗ ಮಾತ್ರ ಈ ಕ್ಷೇತ್ರದಲ್ಲಿ ಯಶಸ್ಸು ಕಾಣಲು ಸಾಧ್ಯವಾಗುತ್ತದೆ. ನಿಮ್ಮ ಬರವಣಿಗೆ ಬಡವರ ಪರವಾಗಿರಬೇಕು. ಈ ಕ್ಷೇತ್ರದಲ್ಲಿ ನಿಷ್ಠೆಯಿಂದ ಕಾರ್ಯನಿರ್ವಹಿಸುವವರಿಗಿಂತ ಕೇವಲ ಇದು ಹೆಚ್ಚು ಆಕರ್ಷಕವಾಗಿದೆ ಎಂದು ಶೋಕಿಗೆ ಬಹಳ' ಜನರು ಈ ಕ್ಷೇತ್ರಕ್ಕೆ ಬರುವುದು ಎಂದು ಬೇಸರವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ.ಓಂಕಾರ ಕಾಕಡೆ ಮಾತನಾಡಿ, ಪತ್ರಿಕೋದ್ಯಮ ಕಾಲಘಟ್ಟದಲ್ಲಿ ಬದಲಾವಣೆಯನ್ನು ಕಾಣುತ್ತಾ ಬಂತು ಅದಕ್ಕೆ ಮುಖ್ಯ ಕಾರಣ ತಂತ್ರಜ್ಞಾನ. ಕಾರ್ಪೋರೇಟ್ ಸಂಸ್ಥೆಗಳು ಮಾಧ್ಯಮಗಳನ್ನು ಖರೀದಿ ಮಾಡುವುದರಿಂದ ಈ ಮಾಧ್ಯಮ ಕ್ಷೇತ್ರ ಏಕ ಸ್ವಾಮ್ಯತೆಯ ಕಡೆ ಸಾಗುತ್ತಿದೆ. ಇದು ಮಾಧ್ಯಮ ಕ್ಷೇತ್ರಕ್ಕೆ ಧಕ್ಕೆಯನ್ನುಂಟು ಮಾಡುತ್ತಿದೆ. ಪ್ರಜಾಪ್ರಭುತ್ವ ಯಶಸ್ವಿಯಾಗಬೇಕಾದರೆ ಮಾಧ್ಯಮ ಸಶಕ್ತವಾಗಬೇಕು. ಅಂದಾಗ ಮಾತ್ರ ಪ್ರಜಾಪ್ರಭುತ್ವದ ಉಳಿಯುವಿಕೆ ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ಸರ ಶೋಧನಾ ವಿದ್ಯಾರ್ಥಿನಿಯರು, ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಮತ್ತಿತರರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕಿ ಡಾ. ತಮೀನಾ ಕೋಲಾರ ಸ್ವಾಗತಿಸಿದರು. ಸಂಶೋಧನಾ ವಿದ್ಯಾರ್ಥಿನಿಯರಾದ ಫಿಲೋಮಿನಾ ಅತಿಥಿಗಳ ಪರಿಚಯಿಸಿದರು. ಸುಷ್ಮಾ ಪವಾರ ನಿರೂಪಿಸಿದರು. ಪವಿತ್ರ ಕಂಬಾರ ವಂದಿಸಿದರು.